**ಕರ್ನಾಟಕ ವಿಧಾನಸಭೆ**
**ಹದಿನೈದನೇ ವಿಧಾನಸಭೆ**
**ಹದಿಮೂರನೇ ಅಧಿವೇಶನ**

# ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2022
## (2022ರ ವಿಧಾನಸಭೆಯ ವಿಧೇಯಕ ಸಂಖ್ಯೆ–15)

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು (1964ರ ಕರ್ನಾಟಕ ಅಧಿನಿಯಮ 12) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ಅಧಿನಿಯಮ, 2022 ಎಂದು ಕರೆಯತಕ್ಕದ್ದು.

(2) ಇದು 2022ರ ಮೇ 30ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 94ಎ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ (1964ರ ಕರ್ನಾಟಕ ಅಧಿನಿಯಮ 12) 94ಎ ಪ್ರಕರಣದ (4)ನೇ ಉಪಪ್ರಕರಣದಲ್ಲಿನ “ಕರ್ನಾಟಕ ಭೂಕಂದಾಯ (ತಿದ್ದುಪಡಿ) ಅಧಿನಿಯಮ, 2018 (ಇಲ್ಲಿ ಇನ್ನು ಮುಂದೆ ತಿದ್ದುಪಡಿ ಅಧಿನಿಯಮವೆಂದು ಉಲ್ಲೇಖಿಸಿದೆ) ಜಾರಿಗೆ ಬಂದ ದಿನಾಂಕದಿಂದ ಒಂದು ವರ್ಷದ ಅವಧಿಯೊಳಗಾಗಿ” ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳ ಬದಲಾಗಿ “ಕರ್ನಾಟಕ ಭೂಕಂದಾಯ (ತಿದ್ದುಪಡಿ) ಅಧಿನಿಯಮ, 2022 (ಇಲ್ಲಿ ಇನ್ನು ಮುಂದೆ ತಿದ್ದುಪಡಿ ಅಧಿನಿಯಮವೆಂದು ಉಲ್ಲೇಖಿಸಿದೆ) ಜಾರಿಗೆ ಬಂದ ದಿನಾಂಕದಿಂದ ಒಂದು ವರ್ಷದ ಅವಧಿಯೊಳಗಾಗಿ” ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳನ್ನು ಪ್ರತಿಯೋಜಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ಅಧ್ಯಾದೇಶ, 2022ನ್ನು (2022ರ ಕರ್ನಾಟಕ ಅಧ್ಯಾದೇಶ ಸಂ. 04) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ದಿನಾಂಕ: 01.01.2005ರ ಹಿಂದಿನಿಂದ ಸಾಗುವಳಿ ಮಾಡಲಾಗುತ್ತಿರುವ, 17.03.2018 ರಿಂದ 16.03.2019ರ ವರೆಗೆ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ಸರ್ಕಾರಿ ಭೂಮಿಗಳನ್ನು ಸಕ್ರಮಗೊಳಿಸಲು ನಮೂನೆ-57ನ್ನು ಸಲ್ಲಿಸುವುದಕ್ಕಾಗಿ ಉಪಬಂಧ ಕಲ್ಪಿಸಲಾಗಿದೆ. ಸಂಸತ್ತಿನ ಸಾರ್ವತ್ರಿಕ ಚುನಾವಣೆ ಮಾದರಿ ನೀತಿ ಸಂಹಿತೆಯ ಕಾರಣ 10.03.2019 ರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿರುವುದಿಲ್ಲ ಮತ್ತು ಶಾಸಕರು ಹಾಗೂ ಸಾರ್ವಜನಿಕರಿಂದ ಈ ಬಗ್ಗೆ ಹಲವು ಮನವಿಗಳು ಸ್ವೀಕೃತಗೊಂಡಿವೆ. ಆದ್ದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ 94ಎ ಪ್ರಕರಣವನ್ನು ತಿದ್ದುಪಡಿ ಮಾಡುವುದರ ಮೂಲಕ ನಮೂನೆ-57ನ್ನು ಸಲ್ಲಿಸುವುದಕ್ಕಾಗಿ ಸಮಯವನ್ನು ವಿಸ್ತರಿಸಲು ಪ್ರಸ್ತಾವಿಸಲಾಗಿದೆ.

ಆದ್ದರಿಂದ ಅನಧಿಕೃತ ಸಾಗುವಳಿ ಭೂಮಿಗಳನ್ನು ಸಕ್ರಮಗೊಳಿಸುವುದಕ್ಕಾಗಿ ನಮೂನೆ-57ರಲ್ಲಿ ಅರ್ಜಿಯನ್ನು ಸಲ್ಲಿಸಲು ಇರುವ ಕೊನೆಯ (Cut-off) ದಿನಾಂಕವನ್ನು ಮತ್ತೊಂದು ವರ್ಷಕ್ಕೆ ವಿಸ್ತರಿಸಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 12) ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, 26.05.2022 ರಂದು ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ಅಧ್ಯಾದೇಶ, 2022ನ್ನು (2022ರ ಕರ್ನಾಟಕ ಅಧ್ಯಾದೇಶ ಸಂ.04) ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೆಯಕ.

# ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆ ನಿಯಮಗಳ 80ನೇ ನಿಯಮದ (1)ನೇ ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.**

ದಿನಾಂಕ: 01.01.2005ರ ಹಿಂದಿನಿಂದ ಸಾಗುವಳಿ ಮಾಡಲಾಗುತ್ತಿರುವ, 17.03.2018 ರಿಂದ 16.03.2019ರ ವರೆಗೆ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ಸರ್ಕಾರಿ ಭೂಮಿಗಳನ್ನು ಸಕ್ರಮಗೊಳಿಸುವುದಕ್ಕಾಗಿ ನಮೂನೆ-57ನ್ನು ಸಲ್ಲಿಸುವುದಕ್ಕಾಗಿ ಉಪಬಂಧ ಕಲ್ಪಿಸಲಾಗಿದೆ. ಸಂಸತ್ತಿನ ಸಾರ್ವತ್ರಿಕ ಚುನಾವಣೆ ನೀತಿ ಸಂಹಿತೆಯ ಕಾರಣ 10.03.2019ರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿರುವುದಿಲ್ಲ ಮತ್ತು ಶಾಸಕರು ಹಾಗೂ ಸಾರ್ವಜನಿಕರಿಂದ ಈ ಬಗ್ಗೆ ಹಲವು ಮನವಿಗಳು ಸ್ವೀಕೃತಗೊಂಡಿವೆ. ಆದ್ದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ 94ಎ ಪ್ರಕರಣವನ್ನು ತಿದ್ದುಪಡಿ ಮಾಡುವುದರ ಮೂಲಕ ನಮೂನೆ-57ನ್ನು ಸಲ್ಲಿಸುವುದಕ್ಕಾಗಿ ಸಮಯವನ್ನು ವಿಸ್ತರಿಸಲು ಪ್ರಸ್ತಾವಿಸಲಾಗಿದೆ.

ಆದ್ದರಿಂದ ಅನಧಿಕೃತ ಸಾಗುವಳಿ ಭೂಮಿಗಳನ್ನು ಸಕ್ರಮಗೊಳಿಸುವುದಕ್ಕಾಗಿ ನಮೂನೆ-57ರಲ್ಲಿ ಅರ್ಜಿಯನ್ನು ಸಲ್ಲಿಸಲು ಇರುವ ಕೊನೆಯ (Cut-off) ದಿನಾಂಕವನ್ನು ಮತ್ತೊಂದು ವರ್ಷಕ್ಕೆ ವಿಸ್ತರಿಸುವುದಕ್ಕಾಗಿ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 12) ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ಅಧ್ಯಾದೇಶ, 2022ನ್ನು (2022ರ ಕರ್ನಾಟಕ ಅಧ್ಯಾದೇಶ ಸಂ.04) ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

**ಆರ್. ಅಶೋಕ್**
ಕಂದಾಯ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ಉದ್ಧೃತ ಭಾಗ

**X X XX XX**

**94ಎ.ಸಮಿತಿ, ಮುಂತಾದವನ್ನು ರಚಿಸುವ ಮೂಲಕ ಅನಧಿಕೃತ ಅಧಿಭೋಗದ ಕೆಲವು ಪ್ರಕರಣಗಳನ್ನು ಸಕ್ರಮಗೊಳಿಸುವುದು.**-(1) ಗೊತ್ತುಪಡಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ, (4)ನೇ ಉಪಪ್ರಕರಣದ ಮೇರೆಗೆ ಭೂ ಮಂಜೂರಾತಿಯ ಉದ್ದೇಶಕ್ಕಾಗಿ ಒಬ್ಬರು ವಿಧಾನಸಭೆಯ ಸದಸ್ಯರನ್ನು ಒಳಗೊಂಡ ಐದು ಸದಸ್ಯರನ್ನು ಮೀರದಂಥ ಸಮಿತಿಯನ್ನು ವಿಧಾನಸಭೆಯ ಪ್ರತಿಯೊಂದು ಚುನಾವಣಾ ಕ್ಷೇತ್ರಕ್ಕೆ ರಚಿಸತಕ್ಕದ್ದು.

(2) ಸಂಬಂಧಪಟ್ಟ ತಾಲೂಕಿನ ತಹಶಿಲ್ದಾರನು ಸಮಿತಿಯ ಕಾರ್ಯದರ್ಶಿಯಾಗಿರತಕ್ಕದ್ದು.

(2ಎ) ಉಪ-ಪ್ರಕರಣ(4)ರ ಮೇರೆಗೆ ಭೂಮಿಯನ್ನು ಮಂಜೂರು ಮಾಡುವ ಉದ್ದೇಶಕ್ಕಾಗಿ ತಾಲೂಕಿಗೆ ಒಂದಕ್ಕಿಂತ ಹೆಚ್ಚಿಗೆ ಸಮಿತಿಗಳನ್ನು ರಚಿಸುವುದು ಅವಶ್ಯಕವೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ, ರಾಜ್ಯ ಸರ್ಕಾರವು ಗೊತ್ತುಪಡಿಸಬಹುದಾದಂತೆ, ಐವರನ್ನು ಮೀರದ ಸದಸ್ಯರನ್ನೊಳಗೊಂಡ ಒಂದು ಅಥವಾ ಒಂದಕ್ಕಿಂತ ಹೆಚ್ಚಿನ ಸಮಿತಿಗಳನ್ನು ರಚಿಸಬಹುದು ಮತ್ತು ರಾಜ್ಯ ಸರ್ಕಾರವು, ಸದಸ್ಯರ ಪೈಕಿಯಿಂದ ಒಬ್ಬರನ್ನು ಅಧ್ಯಕ್ಷರನ್ನಾಗಿ ಹಾಗೂ ಇನ್ನೊಬ್ಬರನ್ನು ಸಮಿತಿಯ ಕಾರ್ಯದರ್ಶಿಯಾಗಿ ನಾಮನಿರ್ದೇಶನ ಮಾಡತಕ್ಕದ್ದು. ಒಂದು ಹೆಚ್ಚುವರಿ ಸಮಿತಿಯನ್ನು ರಚಿಸಿದಾಗ, ಡೆಪ್ಯೂಟಿ ಕಮಿಷನರ್‌ನು, ಸಮಿತಿಯ ಹಾಗೂ ಹೆಚ್ಚುವರಿ ಸಮಿತಿಯು ಕಾರ್ಯವ್ಯಾಪ್ತಿಯನ್ನು ನಿರ್ಧರಿಸತಕ್ಕದ್ದು ಹಾಗು ಸಂಬಂಧಪಟ್ಟ ಸಮಿತಿಗೆ ಬಾಕಿಯಿರುವ ವಿಷಯಗಳನ್ನು ವರ್ಗಾವಣೆ ಮಾಡತಕ್ಕದ್ದು.

(3) ಸಮಿತಿಯು ಅಥವಾ ಹೆಚ್ಚುವರಿ ಸಮಿತಿಯು ಗೊತ್ತುಪಡಿಸಬಹುದಾದಂಥ ಕಾರ್ಯವಿಧಾನವನ್ನು ಅನುಸರಿಸತ್ಕದ್ದು.

(4) 2005ನೇ ಜನವರಿ ಒಂದನೇ ದಿನಾಂಕಕ್ಕೆ (ಇಲ್ಲಿ ಇನ್ನು ಮುಂದೆ ಸದರಿ ದಿನಾಂಕವೆಂದು ಉಲ್ಲೇಖಿಸಿದೆ) ಮುಂಚೆ ಯಾರೇ ವ್ಯಕ್ತಿಯು ಭೂಮಿಯನ್ನು ಅಥವಾ ಅದರ ಭಾಗವನ್ನು ಅನಧಿಕೃತವಾಗಿ ಸ್ವಾಧೀನ ಹೊಂದಿದ್ದು, ಆ ಪ್ರಕರಣದ ಮೇರೆಗೆ ಹೊರದೂಡಲು ಅರ್ಹನಾಗಿದ್ದರೆ ಮತ್ತು ಗೊತ್ತುಪಡಿಸಿದ ಷರತ್ತುಗಳನ್ನು (ಅವನು ಹೊಂದಿರುವ ಹಾಗೂ ಅನಧಿಕೃತವಾಗಿ ಅಧಿಭೋಗಿಸಿದ ಭೂಮಿಯ ವಿಸ್ತೀರ್ಣವು ಒಳಗೊಂಡು) ಅವನು ಈಡೇರಿಸಿದರೆ, (1)ನೇ ಉಪ-ಪ್ರಕರಣದ ಮೇರೆಗೆ ರಚಿಸಿದ ಸಮಿತಿಯು ಅಥವಾ (2ಎ) ಉಪ ಪ್ರಕರಣದ ಮೇರೆಗೆ ರಚಿಸಿದ ಹೆಚ್ಚುವರಿ ಸಮಿತಿಯು, ಗೊತ್ತುಪಡಿಸಬಹುದಾದಂಥ ನಿಯಮಗಳೇನಾದರೂ ಇದ್ದರೆ ಅವುಗಳಿಗೆ ಒಳಪಟ್ಟು ಮತ್ತು ಕರ್ನಾಟಕ ಭೂಕಂದಾಯ (ತಿದ್ದುಪಡಿ) ಅಧಿನಿಯಮ, 2018 (ಇಲ್ಲಿ ಇನ್ನು ಮುಂದೆ ತಿದ್ದುಪಡಿ ಅಧಿನಿಯಮವೆಂದು ಉಲ್ಲೇಖಿಸಿದೆ) ಜಾರಿಗೆ ಬಂದ ದಿನಾಂಕದಿಂದ ಒಂದು ವರ್ಷದ ಅವಧಿಯೊಳಗಾಗಿ ಗೊತ್ತುಪಡಿಸಬಹುದಾದಂಥ ಶುಲ್ಕಗಳೊಂದಿಗೆ ಮತ್ತು (5)ನೇ ಉಪ-ಪ್ರಕರಣದ ಮೇರಗೆ ಸಂದಾಯ ಮಾಡಬೇಕಾದ ಮೊತ್ತವನ್ನು ಸಂದಾಯ ಮಾಡಿದ ಮೇಲೆ, ಅಂಥ ನಮೂನೆಯಲ್ಲಿ ಅಂಥ ಭೂಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದ ಮೇಲೆಮಂಜೂರು ಮಾಡುವುದಕ್ಕೆ 94ನೇ ಪ್ರಕರಣದಲ್ಲಿರುವುದಾವುದೂ ಅಡ್ಡಿಯಾಗತಕ್ಕದ್ದಲ್ಲ:

**X X XX XX**

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಪಿ7, ಕಾಸೂ 376, ಪ್ರತಿಗಳು 500, 7ನೇ ಸೆಪ್ಟೆಂಬರ್, 2022